ಜೆಎಸ್ಎಸ್ ಮಹಾವಿದ್ಯಾಪೀಠ

# ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು

(ಮೈಸೂರು ವಿಶ್ವವಿದ್ಯಾನಿಲಯದಿಂದ ಸ್ವಾಯತ್ತತೆ ಪಡೆದಿದೆ * ನ್ಯಾಕ್‌ನಿಂದ 'ಎ' ದರ್ಜೆ ಮಾನ್ಯತೆ ಪಡೆದಿದೆ)

'ಉತ್ಕೃಷ್ಟತಾ ಅಂತಃಸಾಮರ್ಥ್ಯ ಉಳ್ಳ' ಕಾಲೇಜು ಎಂದು ಯುಜಿಸಿಯಿಂದ ಗುರುತಿಸಲ್ಪಟ್ಟಿದೆ

ಊಟಿರಸ್ತೆ, ಮೈಸೂರು-570 025, ಕರ್ನಾಟಕ

☎ 0821-2548236 & 2548380 Fax: 0821-2548238 E-mail: jssautonomous@gmail.com

ದಿನಾಂಕ: 17.03.2016

## ಪತ್ರಿಕಾ ಪ್ರಕಟಣೆಗಾಗಿ

ಮೈಸೂರು ನಗರದ ಬಿ ಎನ್ ರಸ್ತೆಯಲ್ಲಿರುವ ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ 2016 ರ ಮಾರ್ಚಿ 17 ರಂದು ಜೆಎಸ್ಎಸ್ ಮಹಾವಿದ್ಯಾಪೀಠದ ಸಂಸ್ಥಾಪಕರಾದ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜನ್ಮ ಶತಮಾನೋತ್ಸವ ಮತ್ತು ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ ಯೂತ್ ರೆಡ್‌ಕ್ರಾಸ್ ಘಟಕ, ಎನ್ಎಸ್ಎಸ್ ಮತ್ತು ಎನ್‌ಸಿಸಿ ಘಟಕಗಳ ವತಿಯಿಂಧ ರಕ್ತದಾನ ಶಿಬಿರ ಮತ್ತು ರಕ್ತ ಮಾದರಿ ಪರೀಕ್ಷಾ ಶಿಬಿರವನ್ನು ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದ ಉದ್ಘಾಟನೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಪ್ರೊ ಎಂ ಮಹದೇವಪ್ಪ ಅವರು ನೆರವೇರಿಸಿದರು. 60 ವಿದ್ಯಾರ್ಥಿಗಳು ರಕ್ತದಾನ ಮಾಡಿದರೆ, 50ಕ್ಕೂ ಹೆಚ್ಚು ವಿದ್ಯಾರ್ಥಿಗಳ ಮಾದರಿ ಪರೀಕ್ಷೆಯನ್ನು ಮಾಡಿಸಿಕೊಂಡರು.

ಜೆಎಸ್ಎಸ್ ಆಸ್ಪತ್ರೆಯ ಡಾ॥ ಪಲ್ಲವಿ ಮತ್ತು ಸಿಬ್ಬಂದಿ ವರ್ಗದವರು ಈ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಈ ಶಿಬಿರದಲ್ಲಿ ಕಾಲೇನಿನ ಶೈಕ್ಷಣಿಕ ಡೀನ್ ಡಾ ಕೆ ವಿ ಸುರೇಶ ರವರು, ಸುವರ್ಣ ಮಹೋತ್ಸವ ಆಚರಣೆ ಸಮಿತಿಯ ಕಾರ್ಯದರ್ಶಿಯವರಾದ ಪ್ರೊ ಡಿ ಎಸ್ ಸದಾಶಿವಮೂರ್ತಿಯವರು, ಯೂತ್‌ರೆಡ್‌ಕ್ರಾಸ್ ಘಟಕದ ಸಂಚಾಲಕರಾದ ಪ್ರೊ ಸಂಪತ್ತು ರವರು, ಎನ್‌ಸಿಸಿ ಅಧಿಕಾರಿಗಳಾದ ಡಾ. ಎಲ್ ವಿನಯ್‌ಕುಮಾರ್ ರವರು, ಪ್ರೊ ವರಪ್ರಸಾದ್, ಡಾ B.K. ಕೆಂಡಗಣ್ಣಸ್ವಾಮಿ ಯವರು, ಕಾಲೇಜಿನ ದೈಹಿಕ ಶಿಕ್ಷಣದ ನಿರ್ದೇಶಕರಾದ ಪ್ರೊ ವೆಂಕಟರಾವ್ ಎಂ ಎಸ್ ರವರು, ಪ್ರೊ H.M ಮಹಾಲಿಂಪ್ಪನವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಪ್ರಾಂಶುಪಾಲರು

(ಪ್ರೊ ಎಂ ಮಹದೇವಪ್ಪ)

ಪ್ರಾಚಾರ್ಯರು
ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು
ಊಟಿ ರಸ್ತೆ, ಮೈಸೂರು-25

ಗೆ
ಸಂಪಾದಕರು
---------------
---------------
ಮೈಸೂರು